ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	791 (698+891)
ಮಾನ್ಯ ಸದಸ್ಯರುಗಳ ಹೆಸರು	:	ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ) ಹಾಗೂ ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ವಿಷಯ	:	ಎನ್.ಪಿ.ಎಸ್. ಯೋಜನೆ ರದ್ದುಗೊಳಿಸುವ ಬಗ್ಗೆ
ಉತ್ತರಿಸುವ ದಿನಾಂಕ	:	12.03.2020
ಉತ್ತರಿಸುವವರು	:	ಮಾನ್ಯ ಮುಖ್ಯಮಂತ್ರಿಗಳು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಇದರಲ್ಲಿ ಎನ್.ಪಿ.ಎಸ್. ಪಿಂಚಣಿ ವ್ಯವಸ್ಥೆಗೆ ಒಳಪಟ್ಟ ನೌಕರರೆಷ್ಟು;	ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಖ್ಯೆ – 5,12,521 ಎನ್.ಪಿ.ಎಸ್. ಯೋಜನೆಗೆ ಒಳಪಟ್ಟಿರುವ ನೌಕರರ ಸಂಖ್ಯೆ: 2,28,527.
ಆ)	ರಾಜ್ಯ ಸರ್ಕಾರಿ ನೌಕರರು ಎನ್.ಪಿ.ಎಸ್. ಯೋಜನೆಯನ್ನು ಕೈಬಿಟ್ಟು ಹಳೆ ಪಿಂಚಣಿ ಜಾರಿ ಮಾಡುವಂತೆ ನಡೆಸಿರುವ ಪ್ರತಿಭಟನೆಗಳು ಮತ್ತು ಸದರಿ ನೌಕರರ ಸಂಘಗಳು ಮಾಡಿರುವ ಮನವಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ವಹಿಸಿರುವ ಕ್ರಮಗಳೇನು;	ಸರ್ಕಾರದ ಗಮನಕ್ಕೆ ಬಂದಿದೆ. ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018 ದಿನಾಂಕ: 11.12.2018 ರನ್ವಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ. ದಿನಾಂಕ: 27.09.2019 ರಂದು ಸಭೆ ನಡೆದಿದ್ದು, ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ.
ಇ)	ರಾಜ್ಯ ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ವ್ಯವಸ್ಥೆ ಜಾರಿ ಮಾಡಿದ್ದಲ್ಲಿ ಸರ್ಕಾರಕ್ಕೆ ಆಗಬಹುದಾದ ಲಾಭ-ನಷ್ಟಗಳ ಬಗ್ಗೆ ಪರಿಶೀಲಿಸಲು ಸಮಿತಿಯನ್ನು ರಚಿಸಲಾಗಿದೆಯೇ; ಯಾವಾಗ ರಚಿಸಲಾಯಿತು; (ವಿವರ ನೀಡುವುದು)	

ಈ)	ಈ ಸಮಿತಿಗೆ ಸರ್ಕಾರ ನಿಗಧಿಪಡಿಸಿದ ಕಾಲಮಿತಿ ಎಷ್ಟು; ಸದರಿ ಸಮಿತಿಯು ಎಷ್ಟು ಸಭೆಗಳನ್ನು ನಡೆಸಿದೆ; ಹಾಗೂ ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು;	ಕಾಲಮಿತಿಯನ್ನು ನಿಗಧಿಪಡಿಸಿರುವುದಿಲ್ಲ. ಇದುವರೆಗೆ ಒಂದು ಸಭೆ ನಡೆದಿದೆ. ವರದಿ ಸಲ್ಲಿಕೆಯಾಗಿರುವುದಿಲ್ಲ. ಸಮಿತಿ ವರದಿಯ ನಂತರ ನಿರ್ಧರಿಸಲಾಗುವುದು.
ಉ)	ರಾಜ್ಯ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯನ್ನು ಜಾರಿ ಮಾಡುವಂತೆ ಕೇಂದ್ರ ಸರ್ಕಾರವು ಕಡ್ಡಾಯಗೊಳಿಸಿದೆಯೇ; ಕಡ್ಡಾಯಗೊಳಿಸಿದ್ದಲ್ಲಿ, ಈ ಸಂಬಂಧ ಕೇಂದ್ರ ಸರ್ಕಾರವು ಹೊರಡಿಸಿರುವ ಆದೇಶಗಳ ದಾಖಲೆಯನ್ನು ನೀಡುವುದು;	ರಾಜ್ಯ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯನ್ನು ಜಾರಿ ಮಾಡುವಂತೆ ಕೇಂದ್ರ ಸರ್ಕಾರವು ಕಡ್ಡಾಯಗೊಳಿಸಿರುವುದಿಲ್ಲ.
ಊ)	ಸರ್ಕಾರಿ ನೌಕರರಿಗೆ ಜಾರಿ ಮಾಡಿರುವ ಎನ್.ಪಿ.ಎಸ್. ಯೋಜನೆಯನ್ನು ಹಿಂಪಡೆದು ಹಳೆ ಪಿಂಚಣಿ ವ್ಯವಸ್ಥೆಯನ್ನು ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು)	ಕೇಂದ್ರ ಸರ್ಕಾರವು ಜಾರಿಗೊಳಿಸಿರುವ ನೂತನ ಪಿಂಚಣಿ ಯೋಜನೆಯನ್ವಯ ರಾಜ್ಯದಲ್ಲಿಯೂ ಈ ಯೋಜನೆಯನ್ನು 2006 ರಿಂದ ಅಳವಡಿಸಿಕೊಳ್ಳಲಾಗಿದೆ. ಈಗ ಈ ಯೋಜನೆಯನ್ನು ರದ್ದುಪಡಿಸಿದ್ದರೆ ಸರ್ಕಾರದ ಆರ್ಥಿಕ ಸ್ಥಿತಿಯ ಮೇಲೆ ತೀವ್ರ ಪರಿಣಾಮ ಬೀರುವ ಸಂಭವವಿರುತ್ತದೆ.

ಸಂಖ್ಯೆ: ಆಇ 20 ಪಿಇಎನ್ 2020

(ಬಿ.ಎಸ್. ಯಡಿಯೂರಪ್ಪ)

ಮುಖ್ಯಮಂತ್ರಿ